## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.

**ಸಿಸಿ ನಂ.450/2018**

ಫಿರ್ಯಾದಿಃ  ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ.

-ಃಃ ವಿರುದ್ಧ ಃಃ-

ಆರೋಪಿಃ  ಶಾರದಾ ಗಂಡ ಬಸವರಾಜ ಗುತ್ತೇದಾರ,
ವಃ 45 ವರ್ಷ, ಉಃ ಸೇಂದಿ ಮಾರುವುದು,
ಸಾಃ ಕಲಕಂಭಾ ಗ್ರಾಮ, ತಾಃ ಸೇಡಂ.

----

**ದೋ ಷಾ ರೋ ಪ ಣೆ**

ನಾನು ಶ್ರೀ ಸುನೀಲ್.ಎಸ್.ತಳವಾರ, ಬಿ.ಎ. ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ಆರೋಪಿತಳಾದ ನೀನು ದಿನಾಂಕ 18-04-2018 ರಂದು ಮುಂಜಾನೆ 9.00 ಗಂಟೆ ಸುಮಾರಿಗೆ ಸೇಡಂ ಪೊಲೀಸ್ ಠಾಣಾ ಹದ್ದಿಯಲ್ಲಿರುವ ಕಲಕಂಭ ಗ್ರಾಮದ ಶಾಂತಮೂರ್ತಿ ಇವರ ಮನೆಯ ಪಕ್ಕದಲ್ಲಿನ ಸಾರ್ವಜನಿಕ ಸ್ಥಳದಲ್ಲಿ ಯಾವುದೇ ಪರವಾನಿಗೆ ಇಲ್ಲದೇ ಅಕ್ರಮ ಸೇಂದಿಯನ್ನು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದಾಗ, ಚಾಸಾ-1, 4 ರಿಂದ 7 ನೇದ್ದವರು ಕೂಡಿಕೊಂಡು, ಚಾಸಾ.2 ಮತ್ತು 3 ನೇದ್ದವರ ಸಮಕ್ಷಮದಲ್ಲಿ ದಾಳಿ ಮಾಡಿ, ಒಂದು ಲೀಟರಿನ ಒಟ್ಟು 17 ಪಾಕೆಟಗಳನ್ನು ವಶಪಡಿಸಿಕೊಂಡಿದ್ದು, ಕಾರಣ ನೀನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34 ಹಾಗೂ ಭಾ.ದಂ.ಸಂ. ಕಲಂ 273 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

06/01/23

ದಿನಾಂಕಃ 06-01-2023

ಪ್ರ.ದ.ನ್ಯಾದಂ. ಸೇಡಂ.